# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 23.06.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಉತ್ತರಹಳ್ಳಿ ವಿಭಾಗದ ಎ.ಜಿ.ಎಸ್. ಬಡಾವಣೆಯಲ್ಲಿ ಪಾಲಿಕೆಗೆ ಸೇರಿದ 2 ಎಕರೆ ಪ್ರದೇಶದಲ್ಲಿ ಕೆಲವು ಖಾಸಗಿ ವ್ಯಕ್ತಿಗಳು ಮಾಡಿದ ಒತ್ತುವರಿಯನ್ನು ಕೂಡಲೇ ತೆರವುಗೊಳಿಸಿ, ಆ ಸ್ಥಳದಲ್ಲಿ ವೃಕ್ಷ ಉದ್ಯಾನವನ ಅಭಿವೃದ್ಧಿಪಡಿಸಲು ಪಾಲಿಕೆ ಆಯುಕ್ತರು ಆದೇಶ ನೀಡಿದರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯುಕ್ತರು ಇಂದು ಎ.ಜಿ.ಎಸ್. ಬಡಾವಣೆ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ತಪಾಸಣೆ ಕೈಗೊಂಡು ಬಡಾವಣೆಗೆ ಒದಗಿಸಲಾದ ನಾಗರಿಕ ಸೌಲಭ್ಯಗಳನ್ನು ಪರಿಶೀಲನೆ ನಡೆಸಿದರು. ಕೆಲವು ರಸ್ತೆಗಳಲ್ಲಿ ವಾಹನ ಸಂಚಾರ ಹೆಚ್ಚಾಗಿರುವುದರಿಂದ ಅಲ್ಲಲ್ಲಿ ರಸ್ತೆಗುಂಡಿಗಳು ಉಂಟಾಗಿರುವುದರಿಂದ ತಕ್ಷಣವೇ ರಸ್ತೆಗುಂಡಿಗಳನ್ನು ಮುಚ್ಚಲು ಮತ್ತು ಅವಶ್ಯಕತೆ ಇರುವ ಕಡೆ ಡಾಂಬರೀಕರಣ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಫ್ಯಾಷನ್ ಫ್ಲವರ್ ಡೆಕೋರೇಟರ್ ಅಂಗಡಿಯವರು ನಿರಂತರವಾಗಿ ರಸ್ತೆ ಮೇಲೆ ನೀರು ಹರಿಯಲು ಬಿಟ್ಟ ಪರಿಣಾಮ ರಸ್ತೆ ಮಧ್ಯೆ ಒಂದು ದೊಡ್ಡ ಹೊಂಡ ನಿರ್ಮಾಣ ಆಗುವ ಹಾಗೆ ಕಾರಣರಾಗಿದ್ದಕ್ಕೆ ಸದರಿ ಅಂಗಡಿಯವರಿಗೆ 25,000/- ರೂ.ಗಳ ದಂಡ ವಿಧಿಸಲು ಸೂಚನೆ ನೀಡಿದರು.

ತಪಾಸಣೆ ಸಮಯದಲ್ಲಿ ಹಾಜರಿದ್ದ ಸ್ಥಳೀಯ ಪಾಲಿಕೆ ಸದಸ್ಯರು ಹಾಗೂ ಶಿಕ್ಷಣ ಮತ್ತು ಕ್ರೀಡಾ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀ ರಮೇಶ್ ರಾಜು. ಕೆ ರವರು ಹೈಟೆನ್ಷನ್ ವೈರ್ ಕೆಳಗಡೆ ಕಟ್ಟಡಗಳು ನಿರ್ಮಾಣಗೊಳ್ಳುತ್ತಿರುವುದನ್ನು ತಡೆಗಟ್ಟುವಂತೆ ಕ್ರಮ ಜರುಗಿಸಲು ಆಯುಕ್ತರಿಗೆ ಕೋರಿದರು. ಆಯುಕ್ತರು ಬೆಸ್ಕಾಂ ಸಿಬ್ಬಂದಿಯವರ ಸಹಯೋಗದೊಂದಿಗೆ ಕಟ್ಟಡ ನಿರ್ಮಿಸುತ್ತಿರುವವರ ಮೇಲೆ ಕಟ್ಟುನಿಟ್ಟಿನ ಕ್ರಮಜರುಗಿಸಲು ಸೂಚಿಸಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 23.06.2011

## *ವಾರ್ಡ್-179ರ ಶಾಕಾಂಬರಿ ನಗರದಲ್ಲಿ ಹೊಸದಾಗಿ ನಿರ್ಮಿಸಿರುವ ವಾರ್ಡ್ ಕಛೇರಿ ಉದ್ಘಾಟನೆ ಮತ್ತು ವಿವಿಧ ಕಾಮಗಾರಿಗಳ ಗುದ್ದಲಿ ಪೂಜೆ ಕಾರ್ಯಕ್ರಮ*

ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ದಕ್ಷಿಣ ವಲಯ ವ್ಯಾಪ್ತಿಯಲ್ಲಿರುವ ವಾರ್ಡ್-179, ಶಾಕಾಂಬರಿನಗರದಲ್ಲಿ ಹೊಸದಾಗಿ ನಿರ್ಮಿಸಿರುವ ವಾರ್ಡ್ ಕಛೇರಿಯ ಉದ್ಘಾಟನೆ ಮತ್ತು ವಿವಿಧ ಕಾಮಗಾರಿಗಳ ಗುದ್ದಲಿ ಪೂಜೆಯನ್ನು ಸನ್ಮಾನ್ಯ ಶ್ರೀ ಆರ್. ಅಶೋಕ್, ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು, ಪೂಜ್ಯ ಮಹಾಪೌರರಾದ ಶ್ರೀಮತಿ ಶಾರದಮ್ಮ ಹಾಗೂ ಸ್ಥಳೀಯ ಶಾಸಕರಾದ ಶ್ರೀ ಬಿ.ಎನ್. ವಿಜಯಕುಮಾರ್ ರವರೊಂದಿಗೆ ನೆರವೇರಿಸಿದರು.

ಪ್ರಸ್ತುತ ನಗರದಲ್ಲಿ ಸಾರಿಗೆ ವ್ಯವಸ್ಥೆಯು ಉತ್ತಮವಾದ ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಸಾರ್ವಜನಿಕರ ಪ್ರಯಾಣಕ್ಕಾಗಿ ಹೆಚ್ಚಿನ ಅನುಕೂಲತೆಗಳನ್ನು ಮಾಡಿಕೊಡಲು ಸದಾ ಸಿದ್ಧವಿರುವುದಾಗಿ ತಿಳಿಸಿದ ಮಾನ್ಯ ಸಚಿವರು ಮೆಟ್ರೋ ಕಾಮಗಾರಿ ಪೂರ್ಣಗೊಂಡ ನಂತರ ಸಂಚಾರ ದಟ್ಟಣೆ ತುಂಬಾ ಕಡಿಮೆಯಾಗುತ್ತದೆ ಹಾಗೂ ಸಾರ್ವಜನಿಕರು ಸಹ ಕಾರು, ಬೈಕುಗಳನ್ನು ಬಿಟ್ಟು ಸಾರ್ವಜನಿಕ ವಾಹನಗಳಲ್ಲಿಯೇ ಸಂಚರಿಸಬೇಕೆಂದು ಸಲಹೆ ನೀಡಿದರು.

ಹಿರಿಯರಿಗೆ ನಗರದಲ್ಲಿ ಈಗಾಗಲೇ ಅನೇಕ ಉದ್ಯಾನವನಗಳಿವೆ. ಆದರೆ ಮಕ್ಕಳಿಗೆ ಹೊರಾಂಗಣ ಆಟದ ಮೈದಾನಗಳ ಕೊರತೆಯು ತುಂಬಾ ಇದೆ. ಅವರಿಗೆ ಪಾಠದೊಂದಿಗೆ ಆಟವೂ ಅಷ್ಟೇ ಮುಖ್ಯವಾಗಿರುವುದರಿಂದ, ಇನ್ನು ಮುಂದೆ ಪಾಲಿಕೆಯ ಖಾಲಿ ಸ್ವತ್ತುಗಳನ್ನು ಗುರುತಿಸಿ, ಮಕ್ಕಳಿಗೆ ಉತ್ತಮವಾದ ಆಟದ ಮೈದಾನವನ್ನು ನಿರ್ಮಿಸಿ ಕೊಡಲಾಗುವುದೆಂದು ತಿಳಿಸಿದರು.

ನಂತರ ಸ್ಥಳೀಯ ಶಾಸಕರು ಮಾತನಾಡಿ, ತಮ್ಮ ಕ್ಷೇತ್ರದಲ್ಲಿ ಈಗಾಗಲೇ ಹಲವು ಜನಪರ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಮುಂಬರುವ 6-8 ತಿಂಗಳಲ್ಲಿ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿ, ಸಾರ್ವಜನಿಕರು ತಮ್ಮ ಕುಂದುಕೊರತೆಗಳನ್ನು ಕೂಡಲೇ ನಮ್ಮ ಗಮನಕ್ಕೆ ತಂದರೆ, ಅವುಗಳನ್ನು ಬಗೆಹರಿಸಲು ನಾವು ಸದಾ ಸಿದ್ಧವಿರುವುದಾಗಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಡ ಮಹಿಳೆಯರಿಗೆ ಹೊಲಿಗೆ ಯಂತ್ರಗಳು ಹಾಗೂ ಹಿರಿಯ ನಾಗರಿಕರಿಗೆ ಗುರುತಿನ ಚೀಟಿ ಮತ್ತು ವೈದ್ಯಕೀಯ ಪರಿಹಾರ ಚೆಕ್‌ಗಳನ್ನು ವಿತರಿಸಲಾಯಿತು.

ಸ್ಥಳೀಯ ಪಾಲಿಕೆ ಸದಸ್ಯರಾದ ಶ್ರೀ ಬಿ. ಸೋಮಶೇಖರ್ ರವರು ತಮ್ಮ ವಾರ್ಡ್‌ನಲ್ಲಿ ಉದ್ಘಾಟನೆಗೊಂಡ ಎಲ್ಲಾ ಕಾಮಗಾರಿಗಳ ವಿವರಗಳನ್ನು ನೀಡಿ, ಅವುಗಳನ್ನು ಶೀಘ್ರವೇ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪ ಮಹಾಪೌರರಾದ ಶ್ರೀ ಎಸ್. ಹರೀಶ್, ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ ಹಾಗೂ ಸ್ಥಳೀಯ ಪಾಲಿಕೆ ಸದಸ್ಯರಾದ ಶ್ರೀ ಎಸ್.ಕೆ. ನಟರಾಜ್, ಶ್ರೀ ಸಿ.ಕೆ. ರಾಮಮೂರ್ತಿ, ಶ್ರೀ ಎನ್. ನಾಗರಾಜ್ ಹಾಗೂ ದಕ್ಷಿಣ ವಲಯದ ಜಂಟಿ ಆಯುಕ್ತರು ಮತ್ತು ಮುಖ್ಯ ಅಭಿಯಂತರರು ಹಾಗೂ ಸ್ಥಳೀಯ ಗಣ್ಯವ್ಯಕ್ತಿಗಳು ಉಪಸ್ಥಿತರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**